**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ: DPI-CPI0C7-2(OT)/14/2024-E 1469456 ದಿನಾಂಕ: 05-10-2024

**:: ಸುತ್ತೋಲೆ ::**

ವಿಷಯ: ಖಾಸಗಿ ಅನುದಾನಿತ/ ಅನುದಾನರಹಿತ ಶಾಲೆಗಳ 2024-25 ನೇ ಸಾಲಿನ ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣಕ್ಕೆ ಅರ್ಜಿ ಸಲ್ಲಿಸಲು ಅವಧಿಯನ್ನು ವಿಸ್ತರಿಸಿ ಅವಕಾಶ ಕಲ್ಪಿಸುವ ಕುರಿತು.

ಉಲ್ಲೇಖ:1. ಕರ್ನಾಟಕ ಶಿಕ್ಷಣ ಕಾಯ್ದೆ-1983. ಸೆಕ್ಷನ್-36.

2. ಕರ್ನಾಟಕ ಶಿಕ್ಷಣ ಕಾಯ್ದೆ [ಖಾಸಗಿ ಶಾಲೆಗಳ ನೊಂದಣಿ ಮತ್ತು ನಿಯಂತ್ರಣ] ನಿಯಮ-1999 ಸರ್ಕಾರದ ಅಧಿಸೂಚನೆ ಸಂ:ಖ್ಯೆ ಇಡಿ:137:ವಿವಿದ:98, ದಿನಾಂಕ:19.05.1999
3. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009.
4. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಗಳು-2012.
5. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ: 709 ಪಿಜಿಸಿ 2017, ದಿನಾಂಕ: 08.03.2018[ಅಧಿಸೂಚನೆ-1] ಮತ್ತು ದಿ:07.03.2018[ಅಧಿಸೂಚನೆ-2 ಮತ್ತು 3]
6. ಈ ಕಛೇರಿಯ ಪತ್ರ ಸಂಖ್ಯೆ: DPI-CPI0C7-2(OT)/14/2024-E 1469456 ದಿನಾಂಕ:24-07-2024
7. ಈ ಕಛೇರಿಯ ಪತ್ರ ಸಂಖ್ಯೆ: DPI-CPI0C7-2(OT)/44/2023-E 1171360 ದಿನಾಂಕ:19-09-2024

******

ಮೇಲಿನ ವಿಷಯ ಹಾಗೂ ಉಲ್ಲೇಖ(4)ರ ಸುತ್ತೋಲೆಯಂತೆ 2024-25ನೇ ಸಾಲಿಗೆ ಖಾಸಗಿ ಶಾಲೆಗಳ ಪ್ರಥಮ ಮಾನ್ಯತೆ/ಮಾನ್ಯತೆ ನವೀಕರಣಕ್ಕೆ ಆನ್ ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಉಲಲೇಖ(6)ರಂತೆ ಆಡಳಿತ ಮಂಡಳಿಗೆ ದಿನಾಂಕ:25-07-2024 ರಿಂದ 30-09-2024 ರವರೆಗೆ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು. ತಂತ್ರಾಂಶದಲ್ಲಿ ಲಭ್ಯವಿರುವ ಮಾಹಿತಿಯಂತೆ ಪರಿಶೀಲಿಸಲಾಗಿ, ನಿಗದಿಪಡಿಸಿದ ಕಾಲಾವಕಾಶದೊಳಗೆ ಇನ್ನೂ ಶೇ.50ರಷ್ಟು ಖಾಸಗಿ ಶಾಲೆಗಳು ಮಾನ್ಯತೆ ನವೀಕರಣ ಪಡೆಯಲು ಅರ್ಜಿ ಸಲ್ಲಿಸದೇ ಇರುವುದು ಗಮನಿಸಲಾಗಿದೆ.

ಕಾಯ್ದೆ ಮತ್ತು ನಿಯಮಗಳನುಸಾರ ಶಾಲೆಗಳನ್ನು ಅಧಿಕೃತ ಎಂದು ಪರಿಗಣಿಸಲು ಶಾಲೆಗಳು ಆಯಾ ಅವಧಿಯಲ್ಲಿ ಮಾನ್ಯತೆಯನ್ನು ನವೀಕರಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ಮಾನ್ಯತೆ ನವೀಕರಿಸದಿದ್ದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ವಿದ್ಯಾರ್ಥಿಗಳನ್ನು ನೊಂದಾಯಿಸಲು, ಆರ್.ಟಿ.ಇ. ಶುಲ್ಕ ಮರುಪಾವತಿಗೆ ಪ್ರಸ್ತಾವನೆ ಪರಿಗಣಿಸಲು, ಅನುದಾನಿತ ಶಾಲಾ ಶಿಕ್ಷಕರ ವೇತನ ಪಾವತಿಗೆ ಅವಕಾಶವಿರುವುದಿಲ್ಲ. ಆದ್ದರಿಂದ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಸಕ್ಷಮ ಪ್ರಾಧಿಕಾರಿಗಳಾದ ಉಪನಿರ್ದೇಶಕರು(ಆಡಳಿತ) ಇವರು ವೈಯುಕ್ತಿಕ ಗಮನ ಹರಿಸಿ ತಮ್ಮ ವ್ಯಾಪ್ತಿಯಲ್ಲಿ ಈವರೆವಿಗೂ 2024-25ನೇ ಸಾಲಿಗೆ ಮಾನ್ಯತೆ ಪಡೆಯಲು ಅಗತ್ಯ ದಾಖಲೆ/ಮಾಹಿತಿಗಳೊಂದಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸದಿರುವ ಶಾಲಾ ಆಡಳಿತ ಮಂಡಳಿಗಳಿಗೆ ಪ್ರಸ್ತಾವನೆ ಸಲ್ಲಿಸಲು ಸೂಚನೆ ನೀಡಿ ಅಗತ್ಯ ಕ್ರಮವಹಿಸಲು ತಿಳಿಸಿದೆ.

ಮುಂದುವರೆದು, ಉಲ್ಲೇಖ(7)ರ ಸುತ್ತೋಲೆಯಂತೆ ನಿಯಮಗಳಿಗೆ ತಿದ್ದುಪಡಿ ತಂದಿರುವ ಅಂಶಗಳಂತೆ ಅಗತ್ಯ ಮಾಹಿತಿ/ದಾಖಲೆಗಳಿಂದ ಮಾನ್ಯತೆ ಅರ್ಜಿಯು ತಿರಸ್ಕೃತಗೊಂಡ ಶಾಲಾ ಆಡಳಿತ ಮಂಡಳಿಗಳಿಗೆ ಈಗಾಗಲೇ ಪಾವತಿಸಿದ ಶುಲ್ಕವನ್ನು ಬಳಸಿ ಇದೇ ಶೈಕ್ಷಣಿಕ ವರ್ಷದಲ್ಲಿ ಒಟ್ಟಾರೆ ಗರಿಷ್ಟ 03 ಬಾರಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿರುವಂತೆ ಅರ್ಜಿ ತಿರಸ್ಕೃತಗೊಂಡಿರುವ ಶಾಲಾ ಆಡಳಿತ ಮಂಡಳಿಗಳು ವಿಳಂಬಕ್ಕೆ ಅವಕಾಶ ನೀಡದೇ ತಕ್ಷಣವೇ ಮರು ಅರ್ಜಿ ಸಲ್ಲಿಸಲು ಕ್ರಮವಹಿಸುವುದು. ಹಾಗೂ ಸಕ್ಷಮ ಪ್ರಾಧಿಕಾರಿಗಳು ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ನಿಗದಿಪಡಿಸಿದ ಎಲ್ಲಾ ಮಾನದಂಡಗಳನ್ನು ಪೂರೈಸಿದ ಶಾಲೆಗಳಿಗೆ ಸುತ್ತೋಲೆಯಲ್ಲಿ ಸೂಚಿಸಿದಂತೆ ಮಾನ್ಯತೆ ನವೀಕರಣವನ್ನು ಮೊದಲ ಬಾರಿಗೆ 10 ವರ್ಷಗಳಿಗೆ ನೀಡಲು ಅಗತ್ಯ ಕ್ರಮವಹಿಸುವುದು

2024-25ನೇ ಸಾಲಿನಲ್ಲಿ ಪ್ರಥಮ ಮಾನ್ಯತೆ/ಮಾನ್ಯತೆ ನವೀಕರಣವಾಗದಿರುವಂತಹ ಶಾಲಾ ಆಡಳಿತ ಮಂಡಳಿಗಳಿಗೆ ಅರ್ಜಿ ಸಲ್ಲಿಸಲು ದಿನಾಂಕ: 05-10-2024 ರಿಂದ ದಿನಾಂಕ: 04-11-2024ರವರೆಗೆ ಅಂತಿಮ ಅವಕಾಶ ನೀಡಲಾಗಿದೆ. ಈವರೆವಿಗೂ ಪ್ರಥಮ ಮಾನ್ಯತೆ/ಮಾನ್ಯತೆ ನವೀಕರಣ ಪಡೆಯದಿರುವ ಶಾಲಾ ಆಡಳಿತ ಮಂಡಳಿಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಿ ಅವಕಾಶ ನೀಡಿದ್ದು, ನಿಗದಿತ ದಿನಾಂಕದೊಳಗೆ ಸೂಕ್ತ

ದಾಖಲೆಗಳೊಂದಿಗೆ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಿ, ಮಾನ್ಯತೆ ಪಡೆಯುವಂತೆ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರು ಕ್ರಮ ವಹಿಸುವುದು. ಅರ್ಜಿ ಸಲ್ಲಿಸಲು ಅಂತಿಮ ಅವಕಾಶ ನೀಡಿ ಕಾಲಾವಕಾಶ ವಿಸ್ತರಿಸುತ್ತಿದ್ದು, ಈಗಾಗಲೇ ಸಲ್ಲಿಸಿದ ಅರ್ಜಿಗಳೂ ಸೇರಿದಂತೆ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಆಯಾ ದಿನವೇ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲು ಹೆಚ್ಚಿನ ಸಿಬ್ಬಂದಿಯನ್ನು ನಿಯೋಜಿಸಿ ವಿಳಂಬಕ್ಕೆ ಅವಕಾಶ ನೀಡದಂತೆ ಅರ್ಜಿಗಳನ್ನು ಇತ್ಯರ್ಥಪಡಿಸಲು ಅಗತ್ಯ ಕ್ರಮವಹಿಸಲು ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಚನೆ ನೀಡಿದೆ. ಉಳಿದಂತೆ ಉಲ್ಲೇಖ(2) ರಿಂದ (7)ರವರೆಗಿನ ಸುತ್ತೋಲೆಗಳಲ್ಲಿನ ಎಲ್ಲಾ ಅಂಶಗಳು ಯಥಾವತ್ತಾಗಿರುತ್ತದೆ.

**2024-25ನೇ ಸಾಲಿಗೆ ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ ಸಂಬಂಧ ಹೊಸದಾಗಿ ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಿ ಅವಕಾಶ ನೀಡಿ ನಿಗದಿಪಡಿಸಿದ ವೇಳಾಪಟ್ಟಿ**

| ಕ್ರ.ಸಂ | ವಿವರ | ಅಧಿಕಾರಿಗಳು | ದಿನಾಂಕ |
|---|---|---|---|
| 01 | 2024-25ನೇ ಸಾಲಿಗೆ ಶಾಲಾ ಆಡಳಿತ ಮಂಡಳಿಗಳು ಆನ್ ಲೈನ್ ಮೂಲಕ ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣಕ್ಕೆ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | ಸಂಬಂಧಿಸಿದ ಆಡಳಿತ ಮಂಡಳಿಗಳ ಆಡಳಿತಾಧಿಕಾರಿಗಳು | ದಿ:05-10-2024 ರಿಂದ ದಿ:04-11-2024 |
| 02 | ಉಪನಿರ್ದೇಶಕರ ಕಛೇರಿಯಲ್ಲಿ ಆನ್‌ಲೈನ್ ಮೂಲಕ ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಲು | ವಿಷಯ ನಿರ್ವಾಹಕರು (DCW) ಅರ್ಜಿ ಸ್ವೀಕೃತ ದಿನಾಂಕದಿಂದ 05 ಕರ್ತವ್ಯದ ದಿನಗಳು | ದಿ:06-10-2024 ರಿಂದ ದಿ11-11-2024 |
| | | ಪತ್ರಾಂಕಿತ ಸಹಾಯಕರು (DOF) ಅರ್ಜಿ ಸ್ವೀಕೃತ ದಿನಾಂಕದಿಂದ 05 ಕರ್ತವ್ಯದ ದಿನಗಳು | ದಿ:07-10-2024 ರಿಂದ ದಿ16-11-2024 |
| 03 | ಉಪನಿರ್ದೇಶಕರು (ಆಡಳಿತ) ಇವರು ಆಕ್ಷೇಪಣೆ ಸಹಿತ ಅರ್ಜಿಗಳನ್ನು ಆಡಳಿತ ಮಂಡಳಿಗೆ ರೋಲ್ ಬ್ಯಾಕ್ ಮಾಡಲು ಕಾಲಾವಧಿ | ಉಪನಿರ್ದೇಶಕರು(ಆಡಳಿತ) ಅರ್ಜಿ ಸ್ವೀಕೃತ ದಿನಾಂಕದಿಂದ 05 ಕರ್ತವ್ಯದ ದಿನಗಳು | ದಿ:08-10-2024 ರಿಂದ ದಿ:25-11-2024 |
| 04 | ಆಡಳಿತ ಮಂಡಳಿಗಳು ಆಕ್ಷೇಪಣೆಯನ್ನು ಸರಿಪಡಿಸಿ, ಅರ್ಜಿಯನ್ನು ಆನ್ ಲೈನ್ ಮೂಲಕ ಉಪನಿರ್ದೇಶಕರಿಗೆ ಹಿಂತಿರುಗಿಸಲು ಕೊನೆಯ ದಿನಾಂಕ | ಆಡಳಿತ ಮಂಡಳಿ ಅರ್ಜಿ ಸ್ವೀಕೃತ ದಿನಾಂಕದಿಂದ 07 ಕರ್ತವ್ಯದ ದಿನಗಳು | ದಿ:09-10-2024 ರಿಂದ ದಿ:03-12-2024 |
| 05 | ಸ್ವೀಕರಿಸಿದ ಅರ್ಜಿಗಳನ್ನು ಇತ್ಯರ್ಥಪಡಿಸಿ ಅರ್ಹರಿಗೆ ಮಾನ್ಯತೆ / ಮಾನ್ಯತೆ ನವೀಕರಿಸಿ, ನವೀಕರಣ ಪ್ರಮಾಣ ಪತ್ರವನ್ನು ನೀಡಲು ಅಥವಾ ತಿರಸ್ಕರಿಸಿದ್ದಲ್ಲಿ ತಿರಸ್ಕೃತ ಆದೇಶ ಕೊನೆಯ ದಿನಾಂಕ | ಉಪನಿರ್ದೇಶಕರು(ಆಡಳಿತ) ಅರ್ಜಿ ಸ್ವೀಕೃತ ದಿನಾಂಕದಿಂದ 05 ಕರ್ತವ್ಯದ ದಿನಗಳು | ದಿ:10-10-2024 ರಿಂದ ದಿ:09-12-2024 |

**ವಿಶೇಷ ಸೂಚನೆ:**

ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ದಾಖಲೆಗಳನ್ನು ಮತ್ತು ಕಾಲಾವಧಿ ಮುಗಿದ ಕಾರಣ ನವೀಕರಿಸಿದ ಪರಿಷ್ಕೃತ ದಾಖಲೆಗಳನ್ನು ಆಡಳಿತ ಮಂಡಳಿಗಳು ಎಸ್.ಎ.ಟಿ.ಎಸ್ ನಲ್ಲಿ ಅಭಿವೃದ್ಧಿಪಡಿಸಿರುವ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಿ ನಂತರ ಮಾನ್ಯತೆ ನವೀಕರಣಕ್ಕೆ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಅಪ್‌ಡೇಟ್ ಮಾಡುವುದು. ಅದರಲ್ಲಿನ ಮಾಹಿತಿಗಳನ್ನು ಪರಿಶೀಲಿಸಿ ಮಾನ್ಯತೆ ನವೀಕರಣಕ್ಕೆ ಪರಿಗಣಿಸಲಾಗುವುದು.

ಉಪನಿರ್ದೇಶಕರ ಕಛೇರಿಯಲ್ಲಿ ಪ್ರತಿ ಅರ್ಜಿ ಸ್ವೀಕರಿಸಿದ ನಂತರ ನಿಗದಿತ ಅವಧಿಗಿಂತ ಹೆಚ್ಚು ದಿನಗಳು ಲಾಗಿನ್‌ನಲ್ಲಿ ಬಾಕಿ ಉಳಿಸಿಕೊಳ್ಳುವಂತಿಲ್ಲ. ಉಪನಿರ್ದೇಶಕರು ಅರ್ಜಿಗಳಲ್ಲಿ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಪರಿಶೀಲಿಸಿ ಅಗತ್ಯಾನುಸಾರ ಅಂತಹ ಅರ್ಜಿಗಳನ್ನು ನಿಗದಿಪಡಿಸಿದ ದಿನದೊಳಗಾಗಿ ರೋಲ್ ಬ್ಯಾಕ್ ಮಾಡಿ (DEO ಲಾಗಿನ್‌ಗೆ ಬಂದ ದಿನದಿಂದ **05 ದಿನಗಳೊಳಗೆ)** ಆಡಳಿತ ಮಂಡಳಿಗೆ ಕಳುಹಿಸತಕ್ಕದ್ದು. ಇಲ್ಲವಾದಲ್ಲಿ ಅರ್ಜಿದಾರರು ಅವಕಾಶ ವಂಚಿತರಾಗುತ್ತಾರೆ. ಆಯಾ ಲಾಗಿನ್‌ನ ಸಿಬ್ಬಂದಿ/ಅಧಿಕಾರಿಗಳು ಇದರ ಜವಾಬ್ದಾರಿಯನ್ನು ಅರಿತು ನಿಗದಿತ ಕಾಲಮಿತಿಯಲ್ಲಿ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಎಚ್ಚರಿಕೆ ನೀಡಿದೆ. ಉಲ್ಲೇಖದಲ್ಲಿ ನೀಡಿರುವ ಮಾರ್ಗದರ್ಶನಗಳನ್ನು ಕಡ್ಡಾಯವಾಗಿ ಪಾಲಿಸಿ ಪ್ರಥಮ ಮಾನ್ಯತೆ/ಮಾನ್ಯತೆಯನ್ನು ನವೀಕರಿಸಲು ಸೂಚಿಸಿದೆ. ಒಂದು ವೇಳೆ ಮಾನ್ಯತೆ ನವೀಕರಿಸುವ ಬಗ್ಗೆ ನಿಯಮ ಉಲ್ಲಂಘನೆಯಾದಲ್ಲಿ ಅಥವಾ ಅನಗತ್ಯ ವಿಳಂಬ ಅಥವಾ ಇತರೆ ಆಧಾರದ ಮೇಲೆ ದೂರುಗಳು ಬಂದಲ್ಲಿ ತಮ್ಮ ಮೇಲೆ ಸೂಕ್ತ ಶಿಸ್ತುಕ್ರಮ ಜರುಗಿಸಲಾಗುವುದು.

**ತಮ್ಮ ಜಿಲ್ಲೆಯ ಯಾವುದೇ ಶಾಲೆಯು ಮಾನ್ಯತೆ ನವೀಕರಿಸದ ಕಾರಣದಿಂದ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ನೊಂದಾಯಿಸಲು ತೊಂದರೆಯಾದಲ್ಲಿ ಅಥವಾ ಶಾಲೆಗಳು ಅನಧಿಕೃತ ಎಂದು ಪರಿಗಣಿಸಲು ಕಾರಣರಾದಲ್ಲಿ ಆಯಾ ಜಿಲ್ಲಾ ಉಪನಿರ್ದೇಶಕರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು.**

22.10.2019

**ಆಯುಕ್ತರು**
ಶಾಲಾ ಶಿಕ್ಷಣ ಇಲಾಖೆ.
ಬೆಂಗಳೂರು

**ಇವರಿಗೆ:**

01. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ.
02.ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ. [ಇವರು ಎಲ್ಲಾ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲಾ ಆಡಳಿತ ಮಂಡಳಿ ಹಾಗೂ ಶಾಲಾ ಮುಖ್ಯಸ್ಥರುಗಳಿಗೆ ಸುತ್ತೋಲೆಯನ್ನು ತಲುಪಿಸುವುದು]

**ಪ್ರತಿಯನ್ನು ಮಾಹಿತಿಗಾಗಿ.**

01.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
02.ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರ್ಗಿ ವಿಭಾಗ.
03.ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ.
04.ಹಿರಿಯ ಸಹಾಯಕ ನಿರ್ದೇಶಕರು, ಎಸ್.ಎ.ಟಿ.ಎಸ್., ವಿಭಾಗ, ಇವರು ತಂತ್ರಾಂಶವನ್ನು ಬಿಡುಗಡೆ ಮಾಡುವುದು ಹಾಗೂ ತಂತ್ರಾಂಶವು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ನಿಗಾವಹಿಸುವುದು.
05.ಕಛೇರಿ ಪ್ರತಿ.